ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಮೀನುಗಾರಿಕೆ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯವಾಣಿ ದಿನಾಂಕ : DATE : 30/07/2019

# ಮೀನುಗಾರರ ₹60 ಕೋಟಿ ಸಾಲ ಮನ್ನಾ

ಬೆಂಗಳೂರು: ಅಧಿಕಾರ ವಹಿಸಿಕೊಂಡ ದಿನವೇ ನೇಕಾರರ ಸಾಲ ಮನ್ನಾ ಮಾಡಿದ್ದ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಇದೀಗ ಮೀನುಗಾರರ 60.58 ಕೋಟಿ ರೂ. ಸಾಲ ಮನ್ನಾ ಮಾಡಿದ್ದಾರೆ. ಸೋಮವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ನಿರ್ಣಯ ತೆಗೆದುಕೊಳ್ಳಲಾಗಿದೆ. ಇದರಿಂದಾಗಿ ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಯ 23,507 ಮೀನುಗಾರರ ಸಾಲ ಮನ್ನಾ ಮಾಡಿದಂತಾಗಿದೆ. ಉಡುಪಿ ಶಾಸಕ ರಘುಪತಿ ಭಟ್ ನೇತೃತ್ವದಲ್ಲಿ ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಯ ಶಾಸಕರ ನಿಯೋಗ ಸಿಎಂ ಭೇಟಿ ಮಾಡಿ, ಮೀನುಗಾರರ ಸ್ಥಿತಿಗತಿ ವಿವರಿಸಿ, ಸಾಲಮನ್ನಾ ಮಾಡುವಂತೆ ಮನವಿ ಸಲ್ಲಿಸಿತ್ತು. ಈ ಬೇಡಿಕೆಗೆ ಸಮ್ಮತಿ ದೊರೆತಿದೆ.

ಪುಟ 2



# 60 ಕೋಟಿ ರೂ. ಸಾಲ ಮನ್ನಾ

ಮೊದಲನೇ ಪುಟದಿಂದ...

ಈ ಬಗ್ಗೆ ಕೂಡಲೇ ಕಾರ್ಯ ಪ್ರವೃತ್ತರಾದ ಯಡಿಯೂರಪ್ಪ ಮೀನುಗಾರರ ಸಂಕಷ್ಟಗಳ ಬಗ್ಗೆ ವಿವರವಾದ ಪ್ರಸ್ತಾವನೆ ಸಲ್ಲಿಸುವಂತೆ ಸೂಚಿಸಿದ್ದರು. ಮೀನುಗಾರಿಕೆ ಇಲಾಖೆ ಕಾರ್ಯದರ್ಶಿ ಮತ್ತು ಅಧಿಕಾರಿಗಳ ಜತೆಯಲ್ಲಿ ಸಭೆ ನಡೆಸಿದ ಸಿಎಂ ಈ ಬಗ್ಗೆ ಪೂರ್ಣ ವಿವರ ಪಡೆದು ಸಂಪುಟ ಸಭೆಯಲ್ಲಿ ಸಾಲಮನ್ನಾ ಮಾಡಲು ... ಎಂದಿದ್ದಾರೆ.

ಮೀನುಗಾರರು, ವಿಶೇಷವಾಗಿ ಮಹಿಳಾ ಮೀನುಗಾರರು, ಮೀನುಗಾರಿಕೆ ಚಟುವಟಿಕೆಗಳಾದ ಮೀನು ಮಾರಾಟ, ಪರಿಕರಗಳ ಖರೀದಿ, ಮೀನಿನ ವ್ಯಾಪಾರಕ್ಕಾಗಿ ಬಂಡವಾಳ, ಮೀನಿನ ಸಂರಕ್ಷಣೆ ಹಾಗೂ ಮೀನು ಸಾಗಾಣಿಕೆ ಮತ್ತು ಇತರ ಮೀನುಗಾರಿಕೆ ಸಂಬಂಧಿಸಿದ ಚಟುವಟಿಕೆ ಕೈಗೊಳ್ಳಲು ಶೇ.2 ಬಡ್ಡಿ ದರದಲ್ಲಿ ವಾಣಿಜ್ಯ ಮತ್ತು ಗ್ರಾಮೀಣ ಬ್ಯಾಂಕ್‌ಗಳಲ್ಲಿ ಸಾಲ ಪಡೆಯಲು ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. ಸರ್ಕಾರ ತೆಗೆದುಕೊಂಡ ನಿರ್ಧಾರದಿಂದ ಆರ್ಥಿಕ ಸಂಕಷ್ಟಕ್ಕೀಡಾಗಿದ್ದ ಮೀನುಗಾರರಿಗೆ ಸುಧಾರಿಸಿಕೊಳ್ಳಲು ಮತ್ತು ಉತ್ತಮ ಬದುಕು ಕಟ್ಟಿಕೊಳ್ಳಲು ಅನುಕೂಲವಾಗಿದೆ ಎಂದು ಮಂಗಳೂರು ಶಾಸಕ ವೇದವ್ಯಾಸ ಕಾಮತ್ ಪ್ರತಿಕ್ರಿಯಿಸಿದ್ದಾರೆ.

12